**ಸಿವಿಲ್ ಜಡ್ಜ್ ಹಾಗೂ ಪ್ರ.ದ.ನ್ಯಾ.ದಃ ನ್ಯಾಯಾಲಯಃ ಶೃಂಗೇರಿ**

**ಸಿ.ಸಿ ಸಂಖ್ಯೆ :: 12/2026**

| | | | |
|---|---|---|---|
| **ಸಾಕ್ಷಿದಾರರ ಹೆಸರು** | : | ನೇಹಾ | **PW**-1 |
| **ತಂದೆಯ ಹೆಸರು** | : | ನಾಗೇಶ | **CW**-1 |
| **ವಯಸ್ಸು** | : | 28 ವರ್ಷ | |
| **ಉದ್ಯೋಗ** | : | ಖಾಸಗಿ ಕಂಪನಿ ಹೆಚ್. ಆರ್. | |
| **ವಾಸಸ್ಥಳ** | : | ಶೃಂಗೇರಿ | |

**ದಿನಾಂಕಃ07-05-2026 ರಂದು ಪ್ರಮಾಣವಚನ ಬೋಧಿಸಲಾಯಿತು.**

1. ನನಗೆ ಈ ಪ್ರಕರಣದಲ್ಲಿ ಯಾವುದೇ ವಿಚಾರ ತಿಳಿದಿರುವುದಿಲ್ಲ. ನಾನು ಈ ಪ್ರಕರಣದಲ್ಲಿ ಪೋಲಿಸರಿಗೆ ಯಾವುದೇ ಹೇಳಿಕೆ ನೀಡಿರುವುದಿಲ್ಲ. ಸಾಕ್ಷಿಗೆ ಒಂದು ದಾಖಲೆಯನ್ನು ತೋರಿಸಿ ಅದರಲ್ಲಿರುವ ಸಹಿಯ ಬಗ್ಗೆ ಕೇಳಲಾಗಿ ಸಾಕ್ಷಿಯು ಸದರಿ ದಾಖಲೆಯಲ್ಲಿಇರುವ ತನ್ನ ಸಹಿಯನ್ನು ನೋಡಿ ಒಪ್ಪಿರುತ್ತಾರೆ. ಸದರಿ ದಾಖಲೆಯನ್ನು ನಿಶಾನೆ ಪಿ 1 ಎಂದು, ಅದರಲ್ಲಿರುವ ಸಹಿಯನ್ನು ನಿಶಾನೆ ಪಿ 1(ಏ) ಎಂದು ಗುರುತಿಸಲಾಯಿತು. ಸಾಕ್ಷಿಯು ಮುಂದುವರೆದು ನಿಶಾನೆ ಪಿ 1 ರಲ್ಲಿ ಏನು ವಿಚಾರ ಬರೆದಿದೆ ಎಂದು ತನಗೆ ತಿಳಿದಿರುವುದಿಲ್ಲ ಎಂದು ನುಡಿಯುತ್ತಾರೆ. ಸಾಕ್ಷಿಗೆ ಮತ್ತೊಂದು ದಾಖಲೆಯನ್ನು ತೋರಿಸಿ ಕೇಳಲಾಗಿ ಸಾಕ್ಷಿಯು ಸದರಿ ದಾಖಲೆಯಲ್ಲಿಇರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಅದನ್ನು ಸದರಿ ಸ್ಥಳ ಮಹಜರ್ ಅನ್ನು ನಿಶಾನೆ ಪಿ 2 ಎಂದು, ಅದರಲ್ಲಿರುವ ಸಹಿಯನ್ನು ನಿಶಾನೆ ಪಿ 2 (ಏ) ಎಂದು ಗುರುತಿಸಲಾಯಿತು. ಸಾಕ್ಷಿಯು ಮುಂದುವರೆದು ನಿಶಾನೆ ಪಿ 2 ರಲ್ಲಿ ಏನು ವಿಚಾರ ಬರೆದಿದೆ ಎಂದು ತನಗೆ ತಿಳಿದಿರುವುದಿಲ್ಲ ಎಂದು ನುಡಿಯುತ್ತಾರೆ. ಸಾಕ್ಷಿಯು ಒಂದು ಭಾವಚಿತ್ರವನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ 3 ಎಂದು ಗುರುತಿಸಲಾಯಿತು. ಸಾಕ್ಷಿಯು ಮುಂದುವರೆದು ಸದರಿ ಭಾವಚಿತ್ರವನ್ನು ಯಾವ ಕಾರಣಕ್ಕಾಗಿ ಯಾರು ತೆಗೆದುಕೊಂಡರು ಎಂದು ನನಗೆ ತಿಳಿದಿರುವುದಿಲ್ಲ ಎಂದು ನುಡಿಯುತ್ತಾರೆ. ಸಾಕ್ಷಿಗೆ ಮತ್ತೊಂದು ದಾಖಲೆಯನ್ನು ತೋರಿಸಿ ಹೇಳಲಾಗಿ ಸಾಕ್ಷಿಯು ಸದರಿ ದಾಖಲೆಯಲ್ಲಿಇರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಅದು ಅಮಾನತು ಪಂಚನಾಮೆ ಯಾಗಿದ್ದು ಅದನ್ನು ನಿಶಾನೆ ಪಿ 4 ಎಂದು, ಅದರಲ್ಲಿರುವ ಸಹಿಯನ್ನು ನಿಶಾನೆ ಪಿ 4(ಏ) ಎಂದು ಗುರುತಿಸಲಾಯಿತು. ಸಾಕ್ಷಿಯು ಮುಂದುವರೆದು ನಿಶಾನೆ ಪಿ 4 ರಲ್ಲಿ ಏನು ವಿಚಾರ ಬರೆದಿದೆ ಎಂದು ತನಗೆ ತಿಳಿದಿರುವುದಿಲ್ಲ ಎಂದು ನುಡಿಯುತ್ತಾರೆ. ಅದೇ

ಸಂದರ್ಭದಲ್ಲ್ ತೆಗೆದು ಕೊಂಡ ಒಂದು ಭಾವಚಿತ್ರವನ್ನು ಸಾಕ್ಷಿಯು ನೋಡಿ ಗುರುತಿಸಿದ್ದು ಅದನ್ನು ನಿಪಿ 5 ಎಂದು ಗುರುತಿಸಲಾಯಿತು. ಸಾಕ್ಷಿಯು ಮುಂದುವರೆದು ಸದರಿ ಭಾವಚಿತ್ರವನ್ನು ಯಾವ ಕಾರಣಕ್ಕಾಗಿ ಯಾರು ತೆಗೆದುಕೊಂಡರು ಎಂದು ನನಗೆ ತಿಳಿದಿರುವುದಿಲ್ಲ ಎಂದು ನುಡಿಯುತ್ತಾರೆ. ಸಾಕ್ಷಿಯು ಈ ಪ್ರಕರಣದಲ್ಲಿ ತಾನು ಯಾವುದೆ ಮುಂದುವರೆದ ಹೇಳಿಕೆಯನ್ನು ಪೋಲಿಸರಿಗೆ ನೀಡಿರುವುದಿಲ್ಲ ಎಂದು ನುಡಿಯುತ್ತಾರೆ. ನಾನು ಆರೋಪಿತರೊಂದಿಗೆ ಶಾಮೀಲಾಗಿರುವುದರಿಂದ ನ್ಯಾಯಾಲಯದಲ್ಲಿ ಸುಳ್ಳು ಸಾಕ್ಷ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ನಾನು ಆರೋಪಿತರನ್ನು ಈ ಹಿಂದೆ ನೋಡಿರುವುದಿಲ್ಲ.

(ಈ ಹಂತದಲ್ಲಿ ಎ.ಪಿ.ಪಿ. ಯವರು ಈ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀಸವಾಲು ಮಾಡಲು ಅನುಮತಿ ಕೋರುತ್ತಾರೆ ಅಂತೆಯೇ ಪರಿಗಣಿಸಿ ಅನುಮತಿ ನೀಡಲಾಯಿತು)

**::ಪಾಟೀಸವಾಲು :: A.P.P ರವರಿಂದ ::**

1. ದಿಃ 12.11.2025 ರಂದು ಸಂಜೆ 5.45 ಸಮಯದಲ್ಲಿ ಶಂಕರಪುರದಿಂದ ನಾನು ನನ್ನ ದ್ವಿಚಕ್ರ ವಾಹನ ಸಂಖ್ಯೆ KA 18 EN 1123 ಸ್ಕೂಟಿಯಲ್ಲಿ ಮೃತ ವಿಜಯಲಕ್ಷ್ಮಿ ರವರನ್ನು ಹಿಂಭಾಗದಲ್ಲಿ ಕೂರಿಸಿಕೊಂಡು ಶೃಂಗೇರಿ ಬಸ್ ನಿಲ್ದಾಣಕ್ಕೆ ಬಿಟ್ಟು ಬರಲು ಹೋಗುತ್ತಿದೆ ಎಂದರೆ ಸರಿಯಲ್ಲ. ಸಂಜೆ ಸುಮಾರು 6.00 ಗಂಟೆ ಸಮಯದಲ್ಲಿ ಗೌತಮ್ ಹೊಮ್ ಸ್ಟೇ ಬಳಿ ಎನ್ ಹೆಚ್ 169 ರಸ್ತೆಯಲ್ಲಿ ಬರುತ್ತಿರುವಾಗ ಆರೋಪಿತರು ಕಾರ್ ಸಂಖ್ಯೆ KA 18 MA 1406 ವಾಹನವನ್ನು ಅತೀ ವೇಗ ಮತ್ತು ಅಜಾಗರುಕತೆಯಿಂದ ಚಾಲನೆ ಮಾಡಿದ ಪರಿಣಾಮ ನನ್ನ ದ್ವಿಚಕ್ರ ವಾಹನಕ್ಕೆ ಡಿಕ್ಕಿ ಹೊಡೆದಿದ್ದು ಅದರ ಪರಿಣಾಮ ಹಿಂಬದಿ ಸವಾರಳಾಗಿದ್ದ ಮೃತ ವಿಜಯಲಕ್ಷ್ಮಿ ನೆಲಕ್ಕೆ ಬಿದ್ದಿದ್ದರಿಂದ ತಲೆಗೆ ತೀವ್ರ ಸ್ವರೂಪದ ಗಾಯವಾಗಿದ್ದು, ಚಿಕಿತ್ಸೆಗಾಗಿ ಶೃಂಗೇರಿ ಸರ್ಕಾರಿ ಆಸ್ಪತ್ರೆಗೆ ದಾಖಲು ಮಾಡುವ ಸಮಯಕ್ಕೆ ಅವರು ತೀರಿ ಹೋಗಿದ್ದಾರೆ ಎಂದು ನಮಗೆ ವೈದ್ಯರು ತಿಳಿಸಿದ್ದಾರೆ ಎಂದರೆ ಸರಿಯಲ್ಲ. ಸದರಿ ಅಪಘಾತದ ಪರಿಣಾಮ ನನಗೂ ಸಹ ಸಾಮಾನ್ಯ ಸ್ವರೂಪದ ಗಾಯಗಳಾಗಿದ್ದು, ನಾನು ಚಿಕಿತ್ಸೆಗಾಗಿ ಶೃಂಗೇರಿ ಸರ್ಕಾರಿ ಆಸ್ಪತ್ರೆಯಲ್ಲಿ ದಾಖಲಾದ ಸಂದರ್ಬದಲ್ಲಿ ಪೋಲಿಸರು ಸದರಿ ಆಸ್ಪತ್ರೆಯಲ್ಲಿ ನಿಪಿ 1 ರಂತೆ ನನ್ನ ಹೇಳಿಕೆಯನ್ನು ದಾಖಲೆ ಮಾಡಿಕೂಂಡಿರುತ್ತಾರೆ ಎಂದರೆ ಸರಿಯಲ್ಲ. ದಿಃ 13.11.2025 ರಂದು ಚಾಸಾ 2 ಮತ್ತು 3 ರ ಪಂಚ ಸಾಕ್ಷಿದಾರರ ಸಮಕ್ಷಮ ನಾನು ತೋರಿಸಿದಂತೆ ಅಪಘಾತ ವಾದ ಸ್ಥಳವನ್ನು ಪೋಲಿಸರು ಮದ್ಯಾಹ್ನ 12.45 ರಿಂದ 1.45 ರವರೆಗೂ ಸ್ಥಳದಲ್ಲಿಯೇ ನಿಪಿ 2 ರಂತೆ ದಾಖಲೆ ಮಾಡಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ನಾನು ನಿಪಿ 2 ರಲ್ಲಿರುವ ವಿಚಾರವನ್ನು

ತಿಳಿದುಕೊಂಡು ನಿಪಿ 2 ಏ ರಂತೆ ಸಹಿ ಮಾಡಿರುತ್ತೇನೆ ಎಂದರೆ ಸರಿಯಲ್ಲ. ಅದೇ ಸಂದರ್ಭದಲ್ಲಿ ಪೋಲಿಸರು ನಿಪಿ 3 ರಂತೆ ಭಾವಚಿತ್ರವನ್ನು ತೆಗೆದುಕೊಂಡಿರುತ್ತಾರೆ ಮತ್ತು ಚಿತ್ರಿಕರಣ ಮಾಡಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಅದೇ ದಿನ ಚಾಸಾ 12 ಮತ್ತು 13 ರ ಪಂಚ ಸಾಕ್ಷಿದಾರರ ಸಮಕ್ಷಮ ನಾನು ತೋರಿಸಿದಂತೆ ಶೃಂಗೇರಿ ಪೋಲಿಸ್ ಠಾಣೆಯಲ್ಲಿ ಅಪಘಾತ ಪಡಿಸಿದ ಕಾರ್ ಸಂಖ್ಯೆ KA 18 MA 1406 ಮತ್ತು ಅಪಘಾತಕ್ಕೊಳಪಟ್ಟ ದ್ವಿಚಕ್ರ ವಾಹನದ ಸಂಖ್ಯೆ KA 18 EN 1123 ವಾಹನಗಳನ್ನು ಪೋಲಿಸರು ಮದ್ಯಾಹ್ನ 02.30 ರಿಂದ 4.30 ರವರೆಗೂ ಸ್ಥಳದಲ್ಲಿಯೇ ನಿಪಿ 4 ರಂತೆ ಅಮಾನತ್ತು ಪಂಚನಾಮೆಯನ್ನು ದಾಖಲೆ ಮಾಡಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ನಾನು ನಿಪಿ 4 ರಲ್ಲಿರುವ ವಿಚಾರವನ್ನು ತಿಳಿದುಕೊಂಡು ನಿಪಿ 4 ಏ ರಂತೆ ಸಹಿ ಮಾಡಿರುತ್ತೇನೆ ಎಂದರೆ ಸರಿಯಲ್ಲ. ಅದೇ ಸಂದರ್ಭದಲ್ಲಿ ಪೋಲಿಸರು ನಿಪಿ 5 ರಂತೆ ಭಾವಚಿತ್ರವನ್ನು ತೆಗೆದುಕೊಂಡಿರುತ್ತಾರೆ ಮತ್ತು ಚಿತ್ರಿಕರಣ ಮಾಡಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ದಿಃ 13.11.2025 ರಂದು ನಾನು ಪೋಲಿಸರಿಗೆ ನನ್ನ ಮುಂದುವರಿದ ಹೇಳಿಕೆಯನ್ನು ನೀಡಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿಗೆ ಸದರಿ ದಿಃ 13.11.2025 ರಂದು ಮುಂದುವರಿದ ಹೇಳಿಕೆಯ ಭಾಗಾಂಶ ವನ್ನು ಈ ಕೆಳಕಂಡಂತೆ ಓದಿ ಹೇಳಲಾಯಿತು.

“ನಾನು ಮುಂದುವರಿದ ಹೇಳಿಕೆಯನ್ನು........................................................ ನೀಡಿರುತ್ತೇನೆ.” ಸದರಿ ಮುಂದುವರಿದ ಹೇಳಿಕೆಯ ಭಾಗಂಶವನ್ನು ಸಾಕ್ಷಿಯು ನಿರಾಕರಿಸಿರುತ್ತಾರೆ. ಸದರಿ ಹೇಳಿಕೆಯನ್ನು ನಿಪಿ 6 ಎಂದು ಗುರತಿಸಲಾಯಿತು.

**:: ಪಾಟೀ ಸವಾಲು :: ಆರೋಪಿ ಪರ ಶ್ರೀ. GH ವಕೀಲರಿಂದ ::ಇಲ್ಲ::**

**:: ಮರುವಿಚಾರಣೆ ಇಲ್ಲ ::**

(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಗಣಕ ಯಂತ್ರದಲ್ಲಿ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸರಿ ಇದೆ.

ಸಹಿ/-
ಸಿ.ಜೆ. ಮತ್ತು ಜೆ.ಎಮ್.ಎಫ್.ಸಿ.,
ಶೃಂಗೇರಿ.

ಸಾಕ್ಷಿಯ ಸಹಿ::